# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 16/07/2019

## ಮೇಲ್ಮನೆ ಸದಸ್ಯತ್ವಕ್ಕೆ ನೀರಜ್ ಶೇಖರ್ ರಾಜೀನಾಮೆ, ಬಿಜೆಪಿ ಸೇರುವ ಸಾಧ್ಯತೆ



ಹೊಸದಿಲ್ಲಿ: ಸಮಾಜವಾದಿ ಪಕ್ಷದ ಸಂಸದ ಮತ್ತು ಮಾಜಿ ಪ್ರಧಾನಿ ಚಂದ್ರಶೇಖರ್ ಅವರ ಪುತ್ರ ನೀರಜ್ ಶೇಖರ್ ಅವರು ಸೋಮವಾರ ರಾಜ್ಯಸಭೆಯ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಅವರು ಬಿಜೆಪಿಗೆ ಸೇರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಸಭಾಪತಿ ಎಂ. ವೆಂಕಯ್ಯ ನಾಯ್ಡು ಅವರು ಶೇಖರ್ ಅವರ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ. "ರಾಜೀನಾಮೆ ನಿರ್ಧಾರ ಸ್ವಯಂ ಪ್ರೇರಿತವಾಗಿದ್ದು, ಯಾರ ಬಲವಂತವೂ ಇಲ್ಲ" ಎಂದು ನೀರಜ್ ತಿಳಿಸಿದ್ದಾರೆ. 2007ರಲ್ಲಿ ನೀರಜ್ ಅವರು ತಮ್ಮ ತಂದೆಯ ನಿಧನದಿಂದ ತೆರವಾಗಿದ್ದ ಬಾಲಿಯಾ ಕ್ಷೇತ್ರದಿಂದ ಲೋಕಸಭೆಗೆ ಆಯ್ಕೆಯಾಗಿದ್ದರು. 2019ರ ಲೋಕಸಭಾ ಚುನಾವಣೆಯಲ್ಲೂ ತಮ್ಮ ಕುಟುಂಬದ ಸಾಂಪ್ರದಾಯಿಕ ಕ್ಷೇತ್ರ ಬಾಲಿಯಾದಿಂದ ಸ್ಪರ್ಧೆಗೆ ಇಚ್ಛೆ ವ್ಯಕ್ತಪಡಿಸಿದ್ದರು. ಆದರೆ ಟಿಕೆಟ್ ಸಿಗದ ಕಾರಣ ನಿರಾಶರಾಗಿದ್ದರು.

18